# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1054 |
| ಉತ್ತರಿಸಬೇಕಾದ ದಿನಾಂಕ | : | 24.02.2023 |
| ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ. ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರ. ಸ | ಪ್ರಶ್ನೆ | ಉತ್ತರ |
|---|---|---|
| ಅ) | 2018-19ನೇ ಆಯವ್ಯಯದಲ್ಲಿ ಘೋಷಿಸಿದಂತೆ ರಾಜ್ಯದಲ್ಲಿ ಕ್ರೀಡಾ ವಿಶ್ವವಿದ್ಯಾಲಯವನ್ನು ಸ್ಥಾಪನೆ ಮಾಡುವ ಬಗ್ಗೆ ಪಿಪಿಪಿ ಮಾದರಿಯಲ್ಲಿ ತುಮಕೂರಿನಲ್ಲಿ ಸ್ಥಾಪಿಸಲು ಯಾವುದೇ ಪ್ರತಿಕ್ರಿಯೆ ಬರದೆ ಕ್ರೀಡಾ ವಿಶ್ವವಿದ್ಯಾಲಯ ಸ್ಥಾಪನೆಯೂ ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ಬಂದಿದೆ. |
| ಆ) | ಕ್ರೀಡಾ ವಿಶ್ವವಿದ್ಯಾಲಯವನ್ನು ಸ್ಥಾಪನೆ ಮಾಡಲು ಸ್ಥಳ ಆಯ್ಕೆ ಪ್ರಕ್ರಿಯೆಯು ಯಾವ ಹಂತದಲ್ಲಿದೆ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ವಿಳಂಬವಾಗಿರಲು ಕಾರಣಗಳೇನು: | 2018-19ನೇ ಆಯವ್ಯಯದಲ್ಲಿ ಘೋಷಿಸಿದಂತೆ ರಾಜ್ಯದಲ್ಲಿ ಕ್ರೀಡೆ ಮತ್ತು ಅಂಗಸಾಧನೆಯ ವಿಷಯದಲ್ಲಿ ತುಮಕೂರಿನಲ್ಲಿ ಖಾಸಗಿ ವಿಶ್ವವಿದ್ಯಾಲಯವನ್ನು ಸ್ಥಾಪನೆ ಮಾಡುವ ಬಗ್ಗೆ ಉನ್ನತ ಶಿಕ್ಷಣ ಇಲಾಖೆ ಅಭಿಲಾಷೆ ವ್ಯಕ್ತಪಡಿಸುವ (Expression of Interest) ಪ್ರಕಟಣೆ ಹೊರಡಿಸಿದ್ದು, ಅರ್ಹ ಸಂಸ್ಥೆಗಳಿಂದ ಯಾವುದೇ ಪ್ರತಿಕ್ರಿಯೆ ಇಲ್ಲದೇ ಇರುವುದರಿಂದ ವಿಶ್ವವಿದ್ಯಾಲಯ ಸ್ಥಾಪನೆ ಸಾಧ್ಯವಾಗಿರುವುದಿಲ್ಲ. |
| ಇ) | ಕೊಡಗು ಜಿಲ್ಲೆಯಲ್ಲಿ ವಿಶ್ವವಿದ್ಯಾಲಯವನ್ನು ಸ್ಥಾಪಿಸುವುದಾಗಿ ಈ ಹಿಂದೆ ಘೋಷಣೆ ಮಾಡಲಾಗಿದ್ದು, ತುಮಕೂರಿನಲ್ಲಿ ಪಿಪಿಪಿ ಮಾದರಿಯಲ್ಲಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಸಾಧ್ಯವಾಗದೇ ಇರುವ | ಕೊಡಗು ಜಿಲ್ಲೆಯಲ್ಲಿ ವಿಶ್ವವಿದ್ಯಾಲಯದ ಸ್ಥಾಪನೆಗೆ ಸಂಬಂಧಿಸಿದಂತೆ ಅಗತ್ಯವಿರುವ ಸೂಕ್ತ ನಿವೇಶನ ಗುರುತಿಸಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದ್ದು, ಅದರಂತೆ ಸೂಕ್ತ ನಿವೇಶನ ದೊರೆತಲ್ಲಿ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಬಗ್ಗೆ ಪರಿಶೀಲಿಸಲಾಗುವುದು. |

| | | |
|---|---|---|
| | ಕಾರಣ ಇಲ್ಲಿಯ ಜನರ ಬೇಡಿಕೆಯಂತೆ ಕೊಡಗಿನಲ್ಲಿಯೇ ಕ್ರೀಡಾ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಸರ್ಕಾರ ಮುಂದಾಗುವುದೇ; | |
| ಈ) | ಸ್ಥಾಪಿಸಲು ಸಾಧ್ಯವಾಗದೇ ಇದ್ದಲ್ಲಿ, ಇದಕ್ಕೆ ಇರುವ ಸಮಸ್ಯೆಗಳೇನು; (ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ಕ್ರಮ ಕೈಗೊಂಡು ವಿಶ್ವವಿದ್ಯಾಲಯವನ್ನು ಕೊಡಗಿನಲ್ಲಿಯೇ ಸ್ಥಾಪನೆ ಮಾಡಲಾಗುವುದೇ) | ಸೂಕ್ತ ನಿವೇಶನದ ಕೊರತೆ ಹಾಗೂ ಅನುದಾನದ ಅಲಭ್ಯತೆ ಕಾರಣದಿಂದ ಕ್ರೀಡಾ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಸಾಧ್ಯವಾಗುತ್ತಿಲ್ಲ. |
| ಉ) | ಕ್ರೀಡಾ ವಿಶ್ವವಿದ್ಯಾನಿಲಯವನ್ನು ಕೊಡಗಿನಲ್ಲಿಯೇ ಸ್ಥಾಪಿಸಬೇಕೆಂದು ಅನೇಕ ಹೋರಾಟಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ಬಂದಿದೆ. |

**ವೈಎಸ್‌ಡಿ-ಇಬಿಬಿ/29/2023**

**(ಡಾ|| ಕೆ.ಸಿ. ನಾರಾಯಣಗೌಡ)**
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.